## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | :2225 |
| ಸದಸ್ಯರ ಹೆಸರು | :ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | :26.03.2026 |
| ಉತ್ತರಿಸುವ ಸಚಿವರು | :ಮಾನ್ಯ ಮುಖ್ಯಮಂತ್ರಿಯವರು |

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಸರ್ಕಾರದ ಭಾಗವಾಗಿ ಕೆಲಸ ಮಾಡಿದ ನಿವೃತ್ತಿ ನೌಕರರಿಗೆ ನಗದು ರಹಿತ ಆರೋಗ್ಯ ಸೇವೆ ಒದಗಿಸುವ ಯೋಜನೆ ಜಾರಿಗೊಳಿಸಬೇಕೆಂಬ ಬೇಡಿಕೆ ನಿರಂತರವಾಗಿ ಕೇಳಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಬಂದಿದೆ.</td></tr>
<tr><td>ಆ)</td><td>ಬಂದಿದ್ದಲ್ಲಿ, ಸರ್ಕಾರಿ ನೌಕರರಿಗೆ ಈಗಾಗಲೇ ಜಾರಿಗೊಳಿಸಿರುವ ಆರೋಗ್ಯ ಸಂಜೀವಿನಿ ಯೋಜನೆಯನ್ನು ನಿವೃತ್ತ ನೌಕರರಿಗೂ ವಿಸ್ತರಿಸಲು ಸರ್ಕಾರ ಇದುವರೆಗೆ ಯಾವುದೇ ಅಗತ್ಯ ಕ್ರಮ ವಹಿಸದೇ ಇರಲು ಕಾರಣಗಳೇನು;</td><td rowspan="2">ರಾಜ್ಯ ಸರ್ಕಾರಿ ನೌಕರರಿಗೆ ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನಗದುರಹಿತ ವೈದ್ಯಕೀಯ ಚಿಕಿತ್ಸೆಗಳನ್ನು ಒದಗಿಸಲು ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು (KASS) ದಿನಾಂಕ: 01.10.2025 ರಿಂದ ಜಾರಿಗೆ ಬರುವಂತೆ ಅನುಷ್ಠಾನಗೊಳಿಸಲಾಗಿದೆ.<br><br>ರಾಜ್ಯ ಸರ್ಕಾರದ ನಿವೃತ್ತ ನೌಕರರಿಗೆ ಮತ್ತು ಕುಟುಂಬ ಪಿಂಚಣಿದಾರರಿಗೆ ನಗದುರಹಿತ ವೈದ್ಯಕೀಯ ಸೌಲಭ್ಯ "ಸಂಧ್ಯಾ ಕಿರಣ" ಯೋಜನೆಯನ್ನು ಜಾರಿಗೊಳಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯ ಹಂತದಲ್ಲಿರುತ್ತದೆ.</td></tr>
<tr><td>ಇ)</td><td>ತಮ್ಮ ಜೀವಿತಾವಧಿಯ ಬಹುಭಾಗವನ್ನು ಸರ್ಕಾರದ ಭಾಗವಾಗಿ ಕೆಲಸ ಮಾಡಿ ನಿವೃತ್ತಿ ಆದ ನಂತರ ಅನೇಕ ವಯೋಸಹಜ ಹಾಗೂ ತೀವ್ರತರವಾದ ಖಾಯಿಲೆಗಳಿಂದ ಬಳಲುವ ಪರಿಸ್ಥಿತಿ ನಿರ್ಮಾಣಗೊಳ್ಳುವ ಕಾರಣದಿಂದಾಗಿ ನಿವೃತ್ತಿ ನೌಕರರಿಗೂ ಈ ಯೋಜನೆಯನ್ನು ವಿಸ್ತರಿಸುವುದು ಸೂಕ್ತವಾಗಿರುವುದರಿಂದ ಯಾವ ಕಾಲಮಿತಿಯೊಳಗೆ ಆರೋಗ್ಯ ಸಂಜೀವಿನಿ ಯೋಜನೆಯನ್ನು ಜಾರಿಗೊಳಿಸಲು ಅಗತ್ಯ ಕ್ರಮ ವಹಿಸಲಾಗುವುದು?</td></tr>
</table>

**ಸಂಖ್ಯೆ: ಸಿಆಸುಇ 35 ಎಸ್‌ಎಂಆರ್ 2026**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ